## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕಿರಿಯ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162, ಗಿರಿನಗರ, ಬೆಂಗಳೂರು.

### ನವಂಬರ್ ಮಾಹೆಯ 1ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 07-11-2020 ರಂದು ವಾರ್ಡ್ ಸಂಖ್ಯೆ: 162, ಗಿರಿನಗರದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

*****

ದಿನಾಂಕ: 07-11-2020

ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕನಂದ ಉದ್ಯಾನವನ, ಗಿರಿನಗರ

ಸಮಯ : ಪೂರ್ವಾಹ್ನ 9.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಪ್ರಸಾದ್ | ಮಾನ್ಯ ಅಪರ ನಿರ್ದೇಶಕರು (ನಗರ ಯೋಜನೆ) ಹಾಗೂ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಎಂ. ರಮೇಶ್ | ಕಿರಿಯ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ |
| 3 | ಶ್ರೀ ಚಂದ್ರಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು (ಗಿರಿನಗರ ವಾರ್ಡ್) |
| 4 | ಶ್ರೀ ಚಂದ್ರಶೇಖರ್ | ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 162 |
| 5 | ಶ್ರೀಮತಿ ಶ್ರೀಲಕ್ಷ್ಮಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 162 |
| 6 | ಶ್ರೀ ಚಂದ್ರಶೇಖರ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 7 | ಶ್ರೀಮತಿ ಉಷಾ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 8 | ಶ್ರೀ ಸುನಿಲ್ | ಮೀಟರ್ ರೀಡರ್ (ಬೆಸ್ಕಾಂ) |
| 9 | ಶ್ರೀ ಸ್ವಾಮಿ ಗೌಡ | ತೋಟಗಾರಿಕೆ ಇಲಾಖೆ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಪ್ರಸಾದ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ವಾರ್ಡ್‌ನಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯವರಿಗೆ ಸಮರ್ಪಕವಾಗಿ ಔಷಧಿ ಸಿಂಪಡಣೆ ಕಾರ್ಯಗಳನ್ನು ಕೈಗೊಳ್ಳಲು ಸೂಚಿಸಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಜನಸಂದಣಿ ಪ್ರದೇಶಗಳಲ್ಲಿ ಸಾರ್ವಜನಿಕ ಸಾಮಾಜಿಕ ಅಂತರ (Social Distance) ಕಾಪಾಡಿಕೊಳ್ಳುವುದು ಹಾಗೂ ಮಾಸ್ಕ ಧರಿಸುವುದರ ಬಗ್ಗೆ ಅರಿವು ಮೂಡಿಲು ಹಾಗೂ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.

Scanned by CamScanner

2. ತೋಟಗಾರಿಕೆ ಇಲಾಖೆಗೆ ಸಂಬಂಧಪಟ್ಟಂತೆ 100 ಅಡಿ ಹೊರ ವರ್ತುಲ ರಸ್ತೆ ಫ್ಲೈವೋವರ್ ಕೆಳಭಾಗದಲ್ಲಿ ಗಿಡಗಳನ್ನು ನೆಡಲು ಅಧ್ಯಕ್ಷರು ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿರುತ್ತಾರೆ.

3. ಗಿರಿನಗರ ವಾರ್ಡ್-162ರ ವ್ಯಾಪ್ತಿಯಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರು ಕೊಳವೆ ಬದಲಾಯಿಸಲು ಅಗೆದಿರುವ ರಸ್ತೆ ದುರಸ್ಥಿ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳಲು ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಸೂಚಿಸಿರುತ್ತಾರೆ.

4. ಗಿರಿನಗರ ವಾರ್ಡ್-162ರ 1ನೇ ಹೆಚ್ ಮುಖ್ಯರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಮ್ಯಾನ್‌ಹೋಲ್ ರಸ್ತೆಗಿಂತ ಕೆಳಮಟ್ಟದಲ್ಲಿದ್ದು, ಸಾರ್ವಜನಿಕರಿಗೆ ಹಾಗೂ ಸುಗಮ ವಾಹನ ಸಂಚಾರಕ್ಕೆ ತೊಂದರೆಯಾಗಿರುತ್ತದೆ. ಆದ್ದರಿಂದ, ಕೂಡಲೇ ಸದರಿ ಮ್ಯಾನ್‌ಹೋಲ್‌ಗಳನ್ನು ರಸ್ತೆ ಮಟ್ಟಕ್ಕೆ ಪುನರ್ ನಿರ್ಮಿಸಲು ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಸೂಚಿಸಿರುತ್ತಾರೆ.

5. ಗಿರಿನಗರ ವಾರ್ಡ್-162ರಲ್ಲಿನ 100 ಅಡಿ ಹೊರವರ್ತುಲ ರಸ್ತೆಯಲ್ಲಿರುವ ರಾಜ್ಯ ಶಿಕ್ಷಣ ಇಲಾಖೆಯ ಕಟ್ಟಡದ ಕಂದಾಯ ರೂ: 40.00 ಲಕ್ಷಗಳನ್ನು ಬಾಕಿ ಉಳಿಸಿಕೊಂಡಿದ್ದು, ಸದರಿ ಬಾಕಿ ಕಂದಾಯವನ್ನು ವಸೂಲಿ ಮಾಡಲು ಕಂದಾಯ ಇಲಾಖೆ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

6. ಗಿರಿನಗರ ವಾರ್ಡ್-162ಕ್ಕೆ ಸಂಬಂಧಪಟ್ಟಂತೆ ಮಾರ್ಷಲ್‌ರವರಿಂದ ಯಾವ ಯಾವ ಪ್ರಕರಣಗಳಿಗೆ ವಸೂಲಿ ಮಾಡಿರುವ ದಂಡದ ವಿವರವನ್ನು ಸಲ್ಲಿಸಲು ಸಭೆಯಲ್ಲಿ ಹಾಜರಿದ್ದ ಶ್ರೀ ರಾಜೇಂದ್ರ (ಮಾರ್ಷಲ್) ರವರಿಗೆ ಸೂಚಿಸಲಾಗಿರುತ್ತದೆ.

7. ಬೆಂಗಳೂರು ಜಲ ಮಂಡಳಿ ವತಿಯಿಂದ ಲೋ ಲೇಯಿಂಗ್ ಏರಿಯಾಗಳಲ್ಲಿ (Low Laying Area) ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಲು ತಿಳಿಸಲಾಗಿರುತ್ತದೆ, ಕುಡಿಯುವ ನೀರಿನ ಸಮಸ್ಯೆಗಳಿದ್ದಲ್ಲಿ ಸರಿಪಡಿಸಲು ಸೂಚಿಸಿರುತ್ತಾರೆ ಹಾಗೂ ತಮ್ಮ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಮತ್ತು ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರಗಳನ್ನು ಮುಂದಿನ ಸಭೆಯಲ್ಲಿ ಹಾಜರುಪಡಿಸಲು ತಿಳಿಸಲಾಗಿರುತ್ತದೆ.

8. ವಾರ್ಡ್ ವ್ಯಾಪ್ತಿಯ ಮುಖ್ಯರಸ್ತೆಗಳಲ್ಲಿ ಬೆಸ್ಕಾಂ ರವರು ರಸ್ತೆ ಅಗೆತ ಮಾಡಿ ಕೇಬಲ್ ಅಳವಡಿಸಿದ್ದು, ಸರಿಯಾಗಿ ರಸ್ತೆಗಳನ್ನು ಸರಿಪಡಿಸದೇ ಇರುವುದರ ಬಗ್ಗೆ ಸಂಬಂಧಪಟ್ಟ ಬೆಸ್ಕಾಂನ ಸಹಾಯಕ ಅಭಿಯಂತರರಿಗೆ ತಿಳಿಸಲಾಯಿತು. ಹಾಗೂ ಕೇಬಲ್‌ಗಳನ್ನು ರಸ್ತೆ ಮೇಲ್ಭಾಗದಲ್ಲಿ ಇರುವುದನ್ನು ತೆರವುಗೊಳಿಸಿ ರಸ್ತೆಯನ್ನು ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡಲು ತಿಳಿಸಲಾಯಿತು.

9. ವಾರ್ಡ್ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ (ಟಿ.ಆರ್.ಮಿಲ್) ಹಾಗೂ ಸಂಚಾರಿ ಟೆಸ್ಟಿಂಗ್ ಸೆಂಟರ್‌ನಲ್ಲಿ ಗಂಟಲು ದ್ರವ ಪರೀಕ್ಷೆಯನ್ನು ಸಮರ್ಪಕವಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

Scanned by CamScanner

10. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಜಾಸ್ತಿಯಾಗುತ್ತಿರುವ ಹಿನ್ನೆಲೆಯಲ್ಲಿ ಮಾರ್ಷಲ್‌ಗಳಿಗೆ ವಾರ್ಡ್‌ನಲ್ಲಿ ಸಾಮಾಜಿಕ ಅಂತರ ಕಾಪಾಡಿಕೊಳ್ಳಲು ಮತ್ತು ಮಾಸ್ಕ್ ಧರಿಸುವುದರ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಹಾಗೂ ಮಾಸ್ಕ್ ಧರಿಸದಿರುವವರಿಗೆ ದಂಡ ವಿಧಿಸಲು ತಿಳಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

07/11/2020 | 07/11/2020
--- | ---
ಕಾರ್ಯದರ್ಶಿಗಳು | ಅಧ್ಯಕ್ಷರು
ಹಾಗೂ ಕಿರಿಯ ಅಭಿಯಂತರರು | ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162, ಗಿರಿನಗರ | ವಾರ್ಡ್ ಸಂಖ್ಯೆ: 162, ಗಿರಿನಗರ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
8. ಕಛೇರಿ ಪ್ರತಿ.

Scanned by CamScanner